# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1270 |
| ಮಾನ್ಯ ಸದಸ್ಯರ ಹೆಸರು | ಶ್ರೀ ಎಂ. ನಾಗರಾಜು<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದವರು | ಅಬಕಾರಿ ಸಚಿವರು |
| ಉತ್ತರಿಸಬೇಕಾದ ದಿನಾಂಕ | 29.12.2022 |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಸಂವಿಧಾನದ ಅನುಚ್ಛೇಧ-47 ರಂತೆ ರಾಜ್ಯದಲ್ಲಿ ಪಾನ ನಿಷೇಧ ಜಾರಿಗೊಳಿಸುವ ಬಗ್ಗೆ ಸರ್ಕಾರದ ನಿಲುವೇನು; | ಅಂತಹ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ. |
| ಆ | ರಾಜ್ಯದಲ್ಲಿ ಮದ್ಯ ನಿಷೇಧ ಅಂದೋಲನ ಸಂಘಟನೆಗಳು ಹಲವಾರು ವರ್ಷಗಳಿಂದ ಮದ್ಯ ಬೇಡ-ಶಿಕ್ಷಣ ಬೇಕು, ಆರೋಗ್ಯ ಬೇಕು, ಉದ್ಯೋಗ ಬೇಕು, ಸಾಮಾಜಿಕ ಭದ್ರತೆ ಬೇಕು, ನೀರು ಬೇಕು ಹಾಗೂ ಅಕ್ರಮ ಮದ್ಯ ಮಾರಾಟ ನಿಲ್ಲಲೇಬೇಕೆಂದು ಅಗ್ರಹಿಸಿ ಪ್ರತಿಭಟನೆ ನಡೆಸಿ ಸಂಬಂಧಪಟ್ಟ ಜಿಲ್ಲಾಧಿಕಾರಿಗಳಿಗೆ ಅಹವಾಲುಗಳನ್ನು ಸಲ್ಲಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |



Generated from eOffice by GOPALAIAH K, FD-EXCISE MIN(GK), EXCISE MINISTER, FINANCE DEPT.SEC on 26/12/2022 05:11 PM

| | | |
|---|---|---|
| ಇ | ಹಾಗಿದ್ದಲ್ಲಿ, ಮದ್ಯ ಮಾರಾಟ ಮತ್ತು ಅಕ್ರಮ ಮದ್ಯ ಮಾರಾಟದ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಅಕ್ರಮ ಮದ್ಯ ಮಾರಾಟವನ್ನು ತಡೆಗಟ್ಟಲು ಅಬಕಾರಿ ಇಲಾಖೆಯಿಂದ ವಲಯ ವ್ಯಾಪ್ತಿಯ ರೂಟ್‌ಗಳಲ್ಲಿ ನಿರಂತರವಾಗಿ, ಗಸ್ತು ನಡೆಸಲಾಗುತ್ತಿದೆ. ಸದರಿ ಗಸ್ತಿನ ಸಮಯದಲ್ಲಿ ಮತ್ತು ದೂರು ಸ್ವೀಕೃತವಾದಲ್ಲಿ ಅಕ್ರಮವಾಗಿ ಮದ್ಯ ಮಾರಾಟ ಮಾಡುತ್ತಿರುವ ಸ್ಥಳಗಳ ಮೇಲೆ ದಾಳಿ ನಡೆಸಿ ಅಕ್ರಮಗಳು ಕಂಡುಬಂದಲ್ಲಿ ಅಬಕಾರಿ ಕಾಯ್ದೆ ಮತ್ತು ನಿಯಮಗಳಾನುಸಾರ ಪ್ರಕರಣಗಳನ್ನು ದಾಖಲಿಸಲಾಗುತ್ತಿದೆ. ರಾಷ್ಟ್ರೀಯ ಮತ್ತು ರಾಜ್ಯ ಹೆದ್ದಾರಿಗಳಲ್ಲಿ ನಿಯಮಿತವಾಗಿ ರಸ್ತೆಗಾವಲು ನಡೆಸಿ ಸಂಶಯಾಸ್ಪದ ವಾಹನಗಳನ್ನು ತಪಾಸಣೆಗೆ ಒಳಪಡಿಸಲಾಗುತ್ತಿದೆ. ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸ್ಥಾಯಿ ಸಮಿತಿ ಸಭೆಯನ್ನು ಏರ್ಪಡಿಸಿ ಇತರೆ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸಿ ಅಕ್ರಮ ಹತ್ತಿಕ್ಕಲು ಕ್ರಮವಹಿಸುವ ಕುರಿತು ಪೊಲೀಸ್ ವರಿಷ್ಠಾಧಿಕಾರಿಗಳು ಮತ್ತು ಜಿಲ್ಲಾ ಅರಣ್ಯ ಸಂರಕ್ಷಣಾಧಿಕಾರಿಗಳೊಂದಿಗೆ ಜಂಟಿ ಕಾರ್ಯಚರಣೆ ನಡೆಸಲಾಗುತ್ತಿದೆ. ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 50ರಂತೆ ಕಾರ್ಯವ್ಯಾಪ್ತಿಯಲ್ಲಿ ನಡೆಯುವ ಅಬಕಾರಿ ಅಕ್ರಮಗಳ ಕುರಿತು ಮಾಹಿತಿ ನೀಡಲು ತಿಳುವಳಿಕೆ ಪತ್ರ ಜಾರಿಗೊಳಿಸಲಾಗಿರುತ್ತದೆ.<br><br>ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ನಡೆಸಿದ ದಾಳಿ, ದಾಖಲಿಸಿರುವ ಪ್ರಕರಣಗಳ ವಿವರ ಕೆಳಕಂಡಂತಿದೆ. |

| ಅಬಕಾರಿ ಸಾಲು (ಜುಲೈ ರಿಂದ ಜೂನ್ ಮಾಹೆವರೆಗೆ) | ನಡೆಸಿದ ದಾಳಿ | ದಾಖಲಿಸಿದ ಪ್ರಕರಣಗಳು | | |
|---|---|---|---|---|
| | | ಕ.ಅ.ಕಾಯ್ದೆ 1965ರ ಕಲಂ 32,34 | ಕ.ಅ.ಕಾಯ್ದೆ 1965ರ ಕಲಂ 15(ಎ) | ಒಟ್ಟು |
| 2020–21 | 73906 | 3480 | 22299 | 25779 |
| 2021–22 | 79358 | 2927 | 26936 | 29863 |
| 2022–23 (ಅಕ್ಟೋಬರ್ ಮಾಹೆಯ ಅಂತ್ಯದವರೆಗೆ) | 25890 | 1257 | 9102 | 10359 |
| **ಒಟ್ಟು** | **1,79,154** | **7,664** | **58,337** | **66,001** |



Generated from eOffice by GOPALAIAH K, FD-EXCISE MIN(GK), EXCISE MINISTER, FINANCE DEPT.SEC on 26/12/2022 05:11 PM

| | | |
|---|---|---|
| ಈ | ಅಬಕಾರಿ ಇಲಾಖೆಯಲ್ಲಿ ಭ್ರಷ್ಟಾಚಾರ ನಿರಂತರವಾಗಿ ನಡೆಯುತ್ತಿರುವುದು ಸರ್ಕಾರದ ಗಮನದಲ್ಲಿದೆಯೇ; ಸದರಿ ಭ್ರಷ್ಟಾಚಾರವನ್ನು ನಿರ್ಮೂಲನೆಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು? | ಭ್ರಷ್ಟಾಚಾರ ಕುರಿತಾದ ದೂರುಗಳು ಸಾರ್ವಜನಿಕರಿಂದ ಸ್ವೀಕೃತಗೊಂಡಲ್ಲಿ ನಿಯಮಾನುಸಾರ ವಿಚಾರಣೆ ನಡೆಸಿ ಕ್ರಮ ಕೈಗೊಳ್ಳಲಾಗುತ್ತದೆ. ಭಾರತೀಯ ಮದ್ಯ ತಯಾರಿಕೆ ಸನ್ನದುಗಳು /ಮದ್ಯ ಮಾರಾಟ ಸನ್ನದುಗಳ ಮಂಜೂರಾತಿ, ನವೀಕರಣ ಪ್ರಕ್ರಿಯೆಯನ್ನು ಆನ್‌ಲೈನ್ ಮುಖಾಂತರ ನಡೆಸಲಾಗುತ್ತಿದ್ದು, ಇಲಾಖೆಯ ಸೇವೆಗಳನ್ನು ಸಕಾಲ ವ್ಯಾಪ್ತಿಗೆ ತರಲಾಗಿರುತ್ತದೆ. |

ಆಇ 119 ಇಎಲ್‌ಕ್ಯೂ 2022

(ಕೆ. ಗೋಪಾಲಯ್ಯ)
ಅಬಕಾರಿ ಸಚಿವರು



Generated from eOffice by GOPALAIAH K, FD-EXCISE MIN(GK), EXCISE MINISTER, FINANCE DEPT.SEC on 26/12/2022 05:11 PM